ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

1

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 9/2/2021

# ಹೊರಟ್ಟಿ, ನಜೀರ್ ನಾಮಪತ್ರ ಸಲ್ಲಿಕೆ

9/2/21

ಸಂ.ಕ. ಸಮಾಚಾರ ಬೆಂಗಳೂರು

ಮಂಗಳವಾರ ವಿಧಾನಪರಿಷತ್‌ನ ಸಭಾಪತಿ ಚುನಾವಣೆ ನಡೆಯಲಿದ್ದು ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಸಚಿವ ಬಸವರಾಜ್ ಹೊರಟ್ಟಿ ಹಾಗೂ ಕಾಂಗ್ರೆಸ್ ಅಭ್ಯರ್ಥಿಯಾಗಿ ನಜೀರ್ ಅಹಮ್ಮದ್ ನಾಮಪತ್ರ ಸಲ್ಲಿಸಿದ್ದಾರೆ.

ಸಭಾಪತಿಯಾಗಿದ್ದ ಪ್ರತಾಪ್‌ಚಂದ್ರ ಶೆಟ್ಟಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಹಿನ್ನೆಲೆಯಲ್ಲಿ ತೆರವಾಗಿದ್ದ ಸ್ಥಾನಕ್ಕೆ ಮಂಗಳವಾರ ಚುನಾವಣೆ ನಡೆಯಲಿದೆ. ಹೀಗಾಗಿ ಸೋಮವಾರ ಬಸವರಾಜ ಹೊರಟ್ಟಿ ಅವರು ಬಿಜೆಪಿ ಹಾಗೂ ಜೆಡಿಎಸ್ ಶಾಸಕರೊಂದಿಗೆ ವಿಧಾನಪರಿಷತ್ ಕಾರ್ಯದರ್ಶಿಗೆ ನಾಮಪತ್ರ ಸಲ್ಲಿಕೆ ಮಾಡಿದರೆ, ಇನ್ನೊಂದು ಕಡೆ ಕಾಂಗ್ರೆಸ್ ಅಭ್ಯರ್ಥಿ ನಜೀರ್ ಅಹ್ಮದ್ ಕೂಡಾ ಕಾಂಗ್ರೆಸ್ ಶಾಸಕರೊಂದಿಗೆ ನಾಮಪತ್ರ ಸಲ್ಲಿಸಿದರು.

ವಿಧಾನ ಪರಿಷತ್ ಬಲಾಬಲದ ಪ್ರಕಾರ ಬಿಜೆಪಿ-ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಬಸವರಾಜ್ ಹೊರಟ್ಟಿ ಗೆಲುವು ಬಹುತೇಕ ಖಚಿತ

[illegible]

ಎನ್ನಲಾಗುತ್ತಿದೆ. ಕಡೇ ಕ್ಷಣದಲ್ಲೇನಾದರೂ ಪವಾಡ ನಡೆದರೆ ಮಾತ್ರ ಕಾಂಗ್ರೆಸ್‌ನ ನಜೀರ್ ಅಹಮ್ಮದ್ ಅದೃಷ್ಟ ಒಲಿಯಬಹುದು. ಆದರೆ ಸದ್ಯಕ್ಕೆ ಅಂತಹ ಯಾವುದೇ ಸಾಧ್ಯತೆಯ ಲಕ್ಷಣಗಳು ಕಂಡುಬರುತ್ತಿಲ್ಲ.

ಏಕೆಂದರೆ ಉಪಸಭಾಪತಿ ಚುನಾವಣೆಯಲ್ಲಿ ಬಿಜೆಪಿಗೆ ಜೆಡಿಎಸ್ ಬೆಂಬಲ ನೀಡಿತ್ತು. ಹೀಗಾಗಿ ಸಭಾಪತಿ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಅಭ್ಯರ್ಥಿಗೆ ಬೆಂಬಲ ನೀಡಬೇಕೆಂಬ ತೀರ್ಮಾನವಾಗಿದೆ. ಮಂಗಳವಾರ ಸದನದಲ್ಲಿ ಉಪಸಭಾಪತಿ ಎಂ.ಕೆ.ಪ್ರಾಣೇಶ್ ಅವರು ಸಭಾಪತಿ ಸ್ಥಾನಕ್ಕೆ ಚುನಾವಣೆ ನಡೆಸಲಿದ್ದಾರೆ.

ಉಪಸಭಾಪತಿ ಚುನಾವಣೆಯಲ್ಲೂ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದ ಕಾಂಗ್ರೆಸ್ ಸೋತಿತ್ತು. ಆದರೂ ಅವಿರೋಧ ಆಯ್ಕೆ ಆಗುವುದು ಬೇಡ ಎಂಬ ಹಿನ್ನೆಲೆಯಲ್ಲಿ ಚುನಾವಣೆ ಆಗಲಿ ಎಂದು ಕಾಂಗ್ರೆಸ್ ತನ್ನ ಅಭ್ಯರ್ಥಿ ಕಣಕ್ಕಿಳಿಸಿದೆ.

ವಿಧಾನ ಪರಿಷತ್‌ನಲ್ಲಿ ಸದಸ್ಯರ ಸಂಖ್ಯಾಬಲ ಪಕ್ಷವಾರು ಗಮನಿಸಿದಾಗ, ಬಿಜೆಪಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ.

ಒಟ್ಟು 75 ಸದಸ್ಯರ ಬಲದ ಪರಿಷತ್‌ನಲ್ಲಿ 74 ಸದಸ್ಯರಿದ್ದು, ಪಕ್ಷೇತರ ಸದಸ್ಯರೊಬ್ಬರ ಬೆಂಬಲ ಸೇರಿ ಒಟ್ಟು 32 ಸದಸ್ಯರ ಬಲವನ್ನು ಬಿಜೆಪಿ ಹೊಂದಿದೆ. ಎರಡನೇ ದೊಡ್ಡ ಪಕ್ಷ ಕಾಂಗ್ರೆಸ್ ಪಕ್ಷ 29 ಸದಸ್ಯ ಬಲ ಹೊಂದಿದ್ದರೆ, ಜೆಡಿಎಸ್ 13 ಸದಸ್ಯರನ್ನು ಒಳಗೊಂಡಿದೆ. ಸದ್ಯ 74 ಸದಸ್ಯರನ್ನು ಹೊಂದಿರುವ ಪರಿಷತ್‌ನಲ್ಲಿ ಬಹುಮತ ಸಾಬೀತುಪಡಿಸಲು 38 ಸದಸ್ಯರ ಬಲದ ಅಗತ್ಯವಿದೆ. ಬಿಜೆಪಿಯ 32 ಸದಸ್ಯರ ಜತೆ ಜೆಡಿಎಸ್‌ನ 13 ಸದಸ್ಯರು ಬೆಂಬಲ ಸೂಚಿಸಿದರೆ, ಅಲ್ಲಿಗೆ 45 ಸದಸ್ಯರ ಬಲದೊಂದಿಗೆ ಸಭಾಪತಿ ಆಯ್ಕೆ ಆಗಲಿದೆ. ಕಾಂಗ್ರೆಸ್ ಲೆಕ್ಕಕ್ಕೆ ಮಾತ್ರ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕಿದೆ.



ವಿಧಾನಪರಿಷತ್ ಸಭಾಪತಿ ಸ್ಥಾನಕ್ಕೆ ಕಾಂಗ್ರೆಸ್ ಅಭ್ಯರ್ಥಿಯಾಗಿ ನಜೀರ್ ಅಹ್ಮದ್ ನಾಮಪತ್ರ ಸಲ್ಲಿಸಿದ ಸಂದರ್ಭದಲ್ಲಿ ಶಾಸಕರಾದ ಜಮೀರ್ ಅಹ್ಮದ್ ಖಾನ್, ಬಿ.ಕೆ. ಹರಿಪ್ರಸಾದ್, ಪ್ರಸನ್ನಕುಮಾರ್, ಎಂ, ನಾರಾಯಣಸ್ವಾಮಿ, ಅರವಿಂದ ಕುಮಾರ್ ಅರಳಿ ಉಪಸ್ಥಿತರಿದ್ದರು.



ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಬಸವರಾಜ ಹೊರಟ್ಟಿ ನಾಮಪತ್ರ ಸಲ್ಲಿಸಿದ ಸಂದರ್ಭದಲ್ಲಿ ಸಚಿವರಾದ ಕೋಟ ಶ್ರೀನಿವಾಸಪೂಜಾರಿ, ಎಂಟಿಬಿ ನಾಗರಾಜ್, ಶಾಸಕರಾದ ರಮೇಶ್‌ಗೌಡ, ಅಪ್ಪಾಜಿಗೌಡ, ಭಾರತಿಶೆಟ್ಟಿ, ವೈ.ಎ. ನಾರಾಯಣಸ್ವಾಮಿ, ಮಹಂತೇಶ ಕವಟಗಿಮಠ ಮತ್ತಿತರರಿದ್ದರು.